ಹಾಸನ ನಗರ ಗೃಹ ನಿರ್ಮಾಣ ಸಹಕಾರ ಸಂಘ ನಿ.,
ದೇವರಾಜ ಅರಸ್ ಮಾರ್ಕೆಟ್, ಹಾಸನ. ☎ 264825

ವಾರ್ಷಿಕ ಬಡ್ಡಿ ದರದ ವಿವರಗಳು	ಸಾಮಾನ್ಯರಿಗೆ %	ಹಿರಿಯ ನಾಗರಿಕರಿಗೆ %
* 1 ವರ್ಷದಿಂದ 3 ವರ್ಷಗಳವರೆಗೆ	10.5	11
* 181ದಿನಗಳಿಂದ 365 ದಿನಗಳವರೆಗೆ	8	8.5
* 91 ದಿನಗಳಿಂದ 180 ದಿನಗಳವರೆಗೆ	7	7.5
* 31 ದಿನಗಳಿಂದ 90 ದಿನಗಳವರೆಗೆ	6	6.5
* 90 ತಿಂಗಳುಗಳಲ್ಲಿ ಠೇವಣಿ ಮೊತ್ತ ದ್ವಿಗುಣ		

-ಅಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿ

ಜನತಾ ಮಾಧ್ಯಮ

ಸಂಪಾದಕ : ಆರ್.ಪಿ.ವೆಂಕಟೇಶಮೂರ್ತಿ

ವ್ಯವಸ್ಥಾಪಕ ಸಂಪಾದಕ :ಎಸ್.ಎನ್.ಮಂಜುನಾಥದತ್ತ

PREMIER MARKETING
#817/A,Opp: Mallige Residency,Govt.High School Field,Road,Hassan.
Ph:9620621333
9448742971
9844090035
08172-233509
Dr.Aquaguard
RO+UV+TDS Controller Water Purifier & Water Softner

ಜೂ.16ರಿಂದ ಪೆಟ್ರೋಲ್, ಡೀಸೆಲ್ ದರ ನಿತ್ಯ ಪರಿಷ್ಕರಣೆ

ಜೂನ್ 16ರಿಂದ ಅಂತರರಾಷ್ಟ್ರೀಯ ಮಾರುಕಟ್ಟೆಯ ದರವನ್ನಾಧರಿಸಿ ದೇಶಾದ್ಯಂತ ಪ್ರತಿದಿನ ಪೆಟ್ರೋಲ್ ಮತ್ತು ಡೀಸೆಲ್ ದರ ಪರಿಷ್ಕರಣೆ ಮಾಡಲು ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳು ನಿರ್ಧರಿಸಿವೆ. ಸರ್ಕಾರಿ ಸ್ವಾಮ್ಯದ ತೈಲ ಕಂಪೆನಿಗಳು ಮೇ 1ರಿಂದ ಪ್ರಾಯೋಗಿಕವಾಗಿ ಐದು ನಗರಗಳಲ್ಲಿ ನಿತ್ಯ ತೈಲ ಬೆಲೆ ಪರಿಷ್ಕರಣೆ ಆರಂಭಿಸಿದ್ದು, ಅದು ಯಶಸ್ವಿಯಾದ ಹಿನ್ನೆಲೆಯಲ್ಲಿ ಜೂನ್ 16ರಿಂದ ದೇಶದಾದ್ಯಂತ ಜಾರಿ ಮಾಡುತ್ತಿವೆ.

ಅತೀ ಹೆಚ್ಚು ಬ್ಯಾಟಿಂಗ್ ಸರಾಸರಿ ಪಟ್ಟಿಯಲ್ಲಿ ಧವನ್‌ಗೆ ಅಗ್ರ ಸ್ಥಾನ

ಐಸಿಸಿ ಚಾಂಪಿಯನ್ಸ್ ಟ್ರೋಫಿಯಲ್ಲಿ ಶ್ರೀಲಂಕಾ ವಿರುದ್ಧ ಭಾರತ ತಂಡ ಸೋತಿದ್ದರೂ ಬ್ಯಾಟಿಂಗ್‌ನಲ್ಲಿ ಪರಾಕ್ರಮ ಮೆರೆದ ಶಿಖರ್ ಧವನ್ ವಿಶ್ವ ದಾಖಲೆ ನಿರ್ಮಿಸಿದ್ದಾರೆ. ಆಂಗ್ಲರ ನಾಡಲ್ಲಿ ಉತ್ತಮ ಬ್ಯಾಟಿಂಗ್ ಪ್ರದರ್ಶನ ತೋರುತ್ತಿರುವ ಶಿಖರ್ ಧವನ್ ಅತೀ ಹೆಚ್ಚು ಬ್ಯಾಟಿಂಗ್ ಸರಾಸರಿ ಹೊಂದಿರುವ ಬ್ಯಾಟ್ಸ್‌ಮನ್‌ಗಳ ಪಟ್ಟಿಯಲ್ಲಿ ಅಗ್ರ ಸ್ಥಾನ ಪಡೆದಿದ್ದಾರೆ.



'ಐದಾರು ವರ್ಷಗಳಲ್ಲಿ ಭೌತಿಕ ಬ್ಯಾಂಕ್ ಅವಸಾನ'

ಕಡಿಮೆ ಬಡ್ಡಿ ದರ ಆಧಾರಿತ ವಹಿವಾಟು ಮತ್ತು ಆಧುನಿಕ ತಂತ್ರಜ್ಞಾನದ ವ್ಯವಹಾರ ಸಾಮರ್ಥ್ಯದಿಂದ ಮುಂದಿನ ಐದಾರು ವರ್ಷಗಳಲ್ಲಿ ಭೌತಿಕ ಬ್ಯಾಂಕ್(ನೇರ ಬ್ಯಾಂಕಿಂಗ್ ವಹಿವಾಟು) ವ್ಯವಸ್ಥೆ ಅವಸಾನಗೊಳ್ಳಲಿದೆ ಎಂದು ನೀತಿ ಆಯೋಗದ ಮುಖ್ಯ ಕಾರ್ಯದರ್ಶಿ ಅಮಿತಾಬ್ ಕಾಂತ್ ಹೇಳಿದ್ದಾರೆ. ಭೌತಿಕ ಬ್ಯಾಂಕುಗಳ ವೆಚ್ಚವು ಅಗಾಧವಾಗಿರುವ ಕಾರಣ ಭೌತಿಕ ಬ್ಯಾಂಕ್‌ಗಳು ಹೆಚ್ಚು ಕಾಲ ಅಸ್ತಿತ್ವದಲ್ಲಿ ಉಳಿಯುವುದು ಕಷ್ಟಕರವಾಗಿದೆ ಎಂದಿದ್ದಾರೆ.

ಜನತಾಮಾಧ್ಯಮ ಬೆಳಗಿನ ದೈನಿಕ JANATHAMADHYAMA KARKAN. RNI 41566. ಸಂಪುಟ : 40 ಸಂಚಿಕೆ :212 ಶುಕ್ರವಾರ ಜೂ.9, 2017 ದೂರವಾಣಿ : 268494 ಪುಟ-4 ರೂ.2-00 NO. HSN-761/ 2015-17

ಪ್ಲಾಸ್ಟಿಕ್ ಸಕ್ಕರೆ ಆಯ್ತು, ಈಗ ಅಕ್ಕಿ ಸರದಿ!

ಅರಸೀಕೆರೆ: ಜಿಲ್ಲೆಯಲ್ಲಿ ಪ್ಲಾಸ್ಟಿಕ್ ಸಕ್ಕರೆ ಮಾರಾಟ ಪ್ರಕರಣ ಮಾಸುವ ಮುನ್ನವೇ ಪ್ಲಾಸ್ಟಿಕ್ ಅಕ್ಕಿ ಪತ್ತೆಯಾಗಿರುವುದು ಆತಂಕ ಸೃಷ್ಟಿಸಿದೆ.

ಇಡೀ ರಾಜ್ಯವೇ ಪ್ಲಾಸ್ಟಿಕ್ ಅಕ್ಕಿಯಿಂದ ಭಯಪಡುತ್ತಿರುವ ಸಮಯದಲ್ಲೇ ನಗರದ ಮಿನಿ ವಿಧಾನಸೌಧದ ಹಿಂಭಾಗದಲ್ಲಿರುವ ಬಿ.ಜಿ.ಹಟ್ಟಿಯ ಸ್ವಾಮಿನಾಯ್ಕ ಎಂಬುವವರ ಮನೆಯಲ್ಲಿ ನ್ಯಾಯಬೆಲೆ ಅಂಗಡಿಯಿಂದ ತಂದಿದ್ದ ಅಕ್ಕಿಯಲ್ಲಿ ಪ್ಲಾಸ್ಟಿಕ್ ಅಕ್ಕಿ ಮಿಶ್ರವಾಗಿರುವ ಬಗ್ಗೆ ಗ್ರಾಮಸ್ಥರು ಆತಂಕ ವ್ಯಕ್ತಪಡಿಸಿದ್ದಾರೆ.

ಸರ್ಕಾರ ನೀಡುತ್ತಿರುವ ಅನ್ನಭಾಗ್ಯ ಯೋಜನೆಯ ಅಕ್ಕಿಯನ್ನು ನಗರದ ಬಿ.ಜಿ. ಹಟ್ಟಿಯ ಸುತ್ತಮುತ್ತಲಿನ ಜನತೆ ಕಳೆದ ಬಾರಿ ತಮ್ಮ ಪಡಿತರ ಕೂಪನ್‌ನಿಂದ ಪಡೆದಿದ್ದರು. ಒಂದು ವಾರದಿಂದಲೂ ಇದೇ ಅಕ್ಕಿಯಲ್ಲಿ ಅನ್ನ ಮತ್ತು ಇನ್ನಿತರೆ ಆಹಾರವನ್ನು ಮಾಡಿಕೊಂಡು ಸೇವಿಸುತ್ತಿದ್ದ ಜನತೆಗೆ ಹೊಟ್ಟೆನೋವು ಹಾಗೂ ಬೇಧಿ ಉಂಟಾಗಿದೆ. ಈ ಬಗ್ಗೆ ಆತಂಕದಿಂದಿದ್ದ ಜನರು ಗುರುವಾರ ಬೆಳಿಗ್ಗೆ ಅಕ್ಕಿಯನ್ನು ಬೇಯಿಸಿ ಅನ್ನವನ್ನು ಉಂಡೆ ಮಾಡಿದಾಗ ಪ್ಲಾಸ್ಟಿಕ್‌ನ ಉಂಡೆಯಂತಾಗಿತ್ತು. (-ಪುಟ 4ಕ್ಕೆ)

ಅಕ್ಕಿ ಮಾದರಿ ಪರೀಕ್ಷೆ

ಬಿ.ಜಿ.ಹಟ್ಟಿಯ ಜನತೆ ಪ್ಲಾಸ್ಟಿಕ್ ಅಕ್ಕಿ ಬಗ್ಗೆ ಸ್ಥಳೀಯ ಸರ್ಕಾರಿ ಜೆ.ಸಿ. ಆಸ್ಪತ್ರೆಯ ಆಹಾರ ನಿರೀಕ್ಷಕರಿಗೆ ದೂರನ್ನು ಸಲ್ಲಿಸಿದ್ದು, ಈಗಾಗಲೇ ಪಡೆದಿರುವ ಅಕ್ಕಿಯ ಮಾದರಿಯನ್ನು ಪ್ರಯೋಗಾಲಯದಲ್ಲಿ ಪರೀಕ್ಷಿಸಿ ಗುಣಮಟ್ಟದ ಬಗ್ಗೆ ಪ್ರಮಾಣ ಪತ್ರ ನೀಡುವಂತೆ ಅರ್ಜಿ ಸಲ್ಲಿಸಿದ್ದಾರೆ.

ಪ್ರಕರಣ ನಗರದಲ್ಲಿ ಹರಿದಾಡುತ್ತಿದ್ದಂತೆಯೇ ಎಚ್ಚೆತ್ತ ತಾಲ್ಲೂಕು ಆಡಳಿತ, ಈಗಾಗಲೇ ಪಡೆಯಲಾಗಿದ್ದ ಅಕ್ಕಿಯ ಮಾದರಿಯನ್ನು ವಶಕ್ಕೆ ಪಡೆದುಕೊಂಡು ಹೆಚ್ಚಿನ ಪರೀಕ್ಷೆಗಾಗಿ ಕಳುಹಿಸಿಕೊಡಲು ಕ್ರಮ ಕೈಗೊಂಡಿದೆ.

ಕ್ರಮ ಕೈಗೊಳ್ಳಲು ಒತ್ತಾಯ

ಈ ಹಿಂದೆ ಕಲ್ಲು, ಮಣ್ಣು ಮತ್ತು ಕಲ್ಮಶಗಳನ್ನು ಮಿಶ್ರಣ ಮಾಡಿ ಶೇಖರಿಸಿಡಲಾಗಿದ್ದ ರಾಗಿ ಹಗರಣ ಇನ್ನೂ ಸ್ಥಳೀಯ ಜನತೆಯ ಕಣ್ಮುಂದೆ ಇರುವಾಗಲೇ ಪ್ಲಾಸ್ಟಿಕ್ ಮಿಶ್ರಿತ ಅಕ್ಕಿ ವಿತರಣೆಯಂತಹ ಪ್ರಕರಣಗಳು ನಡೆಯುತ್ತಿರುವುದು ಅನೇಕ ಅನುಮಾನಕ್ಕೆ ಕಾರಣವಾಗಿದೆ.

ಪ್ರಾರಂಭದಲ್ಲೇ ತಪಾಸಣೆ ಮಾಡಿ ಅಕ್ಕಿ ವಿತರಣೆ ಮಾಡುವಂತೆ ತಾಲ್ಲೂಕು ಆಡಳಿತ ಮತ್ತು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಆಗಬಹುದಾದ ಅವಘಡಗಳಿಗೆ ಆಯಾ ಇಲಾಖೆಗಳ ಅಧಿಕಾರಿಗಳು ಮತ್ತು ಸೊಸೈಟಿ ಮಾಲೀಕರೇ ಕಾರಣಕರ್ತರಾಗುತ್ತಾರೆ ಎಂದು ವಿವಿಧ ಸಂಘ ಸಂಸ್ಥೆಗಳ ಮುಖಂಡರು ಎಚ್ಚರಿಕೆ ನೀಡಿದ್ದಾರೆ. ಇಲಾಖೆ ವತಿಯಿಂದ ಸೂಕ್ತ ತನಿಖೆಯಾಗಬೇಕು ಮತ್ತು ಈ ಪ್ರಕರಣದ ಹಿಂದಿರುವ ವ್ಯಕ್ತಿಗಳನ್ನು ಪತ್ತೆ ಹಚ್ಚಬೇಕು. ಇಲ್ಲದಿದ್ದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸುವುದಾಗಿ ಎಚ್ಚರಿಸಿದರು.

ಪಡಿತರ ಪದಾರ್ಥಗಳಲ್ಲಿ ಸರಬರಾಜು

ಅರಸೀಕೆರೆ ಎಪಿಎಂಸಿ ಗೋದಾಮುಗಳಲ್ಲಿ ಶೇಖರಿಸಿರುವ ಅಕ್ಕಿ ಮೂಟೆಗಳು ಪ್ಲಾಸ್ಟಿಕ್ ಅಕ್ಕಿ ಮಿಶ್ರಿತವೇ? ತಾಲ್ಲೂಕಿನ ನ್ಯಾಯಬೆಲೆ ಅಂಗಡಿಗಳು, ಹಾಸ್ಟೆಲ್‌ಗಳು, ಅಂಗನವಾಡಿ ಸೇರಿದಂತೆ ಪ್ರಮುಖ ಸ್ಥಳಗಳಿಗೆ ನಗರದ ಕೃಷಿ ಮಾರುಕಟ್ಟೆ ಪ್ರಾಂಗಣದಲ್ಲಿರುವ ಗೋದಾಮುಗಳಿಂದ ಅಕ್ಕಿ ಸೇರಿದಂತೆ ಇನ್ನಿತರೆ ಪಡಿತರ ಪದಾರ್ಥಗಳನ್ನು ಸರಬರಾಜು ಮಾಡಲಾಗುತ್ತದೆ. ಟನ್‌ಗಟ್ಟಲೇ ಅಕ್ಕಿಯನ್ನು ಶೇಖರಿಸಿಟ್ಟುಕೊಳ್ಳುವ ಈ ಗೋದಾಮುಗಳಲ್ಲಿ ಈಗಾಗಲೇ ಶೇಖರಣೆಯಾಗಿರುವ ಅಕ್ಕಿ ಮೂಟೆಗಳಲ್ಲಿ ಪ್ಲಾಸ್ಟಿಕ್ ಅಕ್ಕಿ ಮಿಶ್ರಣವಾಗಿರಬಹುದೇ ಎಂಬ ಅನುಮಾನವನ್ನು ಸಾರ್ವಜನಿಕರು ವ್ಯಕ್ತಪಡಿಸುತ್ತಿದ್ದಾರೆ.

ಆಯುರ್ವೇದ ಪದ್ಧತಿಗೆ ಹೆಚ್ಚು ಮಹತ್ವ

ಕೇಂದ್ರದ ಕಾನೂನು ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವ ಪಿ.ಪಿ.ಚೌಧರಿ

ಹಾಸನ : ಗ್ರಾಮೀಣ ಭಾಗಗಳಲ್ಲಿ ಇಂದಿಗೂ ಆಯುರ್ವೇದ ಚಿಕಿತ್ಸೆ ಜೀವಂತವಾಗಿದೆ. ಇತ್ತೀಚಿನ ದಿನಗಳಲ್ಲಿ ಇದು ತನ್ನ ಅಸ್ತಿತ್ವ ಕಳೆದುಕೊಂಡಿದೆ. ಆದರೆ ವಿಶ್ವದ ಎಲ್ಲಾ ರಾಷ್ಟ್ರಗಳಲ್ಲೂ ಇಂದು ಆಯುರ್ವೇದ ಚಿಕಿತ್ಸೆಯ ಬಗ್ಗೆ ನಂಬಿಕೆ ಇದೆ. ಮುಂದಿನ ದಿನಗಳಲ್ಲಿ ಆಯುರ್ವೇದ ಚಿಕಿತ್ಸೆಗೆ ಹೆಚ್ಚು ಮಹತ್ವ ದೊರೆಯಲಿದೆ ಎಂದು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವ ಪಿ.ಪಿ.ಚೌಧರಿ ತಿಳಿಸಿದರು.

ನಗರದ ಧರ್ಮಸ್ಥಳ ಮಂಜುನಾಥೇಶ್ವರ ಆಯುರ್ವೇದ ಕಾಲೇಜಿನಲ್ಲಿ ಗುರುವಾರ ಹಮ್ಮಿಕೊಂಡಿದ್ದ ಸಂವಾದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಬ್ರಿಟೀಷರು ನಮ್ಮ ದೇಶದಿಂದ ಎಲ್ಲಾ ಸಂಪತ್ತನ್ನು ದೋಚಿಕೊಂಡರೂ ನಮ್ಮ ಜನರಿಗೆ ದೇವರ ಮೇಲೆ ಇರುವ ನಂಬಿಕೆ ಹಾಗೂ ಆಯುರ್ವೇದ ಚಿಕಿತ್ಸೆ ಮೇಲಿರುವ ನಂಬಿಕೆಯನ್ನು ಮಾತ್ರ ದೋಚಿಕೊಳ್ಳಲು ಸಾಧ್ಯವಾಗಿಲ್ಲ ಎಂದರು.

ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ವಿಶ್ವದಲ್ಲೇ ಭಾರತ ಮುಂಚೂಣಿಯಲ್ಲಿದೆ. ಮೋದಿ ನೇತೃತ್ವದ ಕೇಂದ್ರ ಸರ್ಕಾರ ದೇಶದ ಶಿಕ್ಷಣ, ಆರೋಗ್ಯ ಹಾಗೂ ಕೃಷಿ ಕ್ಷೇತ್ರವನ್ನು ಸಂಪೂರ್ಣ ಡಿಜಿಟಲೀಕರಣ ಮಾಡಲು ಶ್ರಮಿಸುತ್ತಿದೆ ಎಂದು ಹೇಳಿದರು.

ದೇಶದಲ್ಲಿ 83 ಕೋಟಿಯಷ್ಟು ಜನರು ಇಂದಿಗೂ ಗ್ರಾಮೀಣ ಪ್ರದೇಶದಲ್ಲಿ ವಾಸಿಸುತ್ತಿದ್ದಾರೆ. ಇದನ್ನು ಗಮನದಲ್ಲಿಟ್ಟುಕೊಂಡು ಕೇಂದ್ರ ಸರ್ಕಾರ 2.50 ಲಕ್ಷ ಗ್ರಾಮ ಪಂಚಾಯಿತಿಗಳಿಗೆ ಅತ್ಯಾಧುನಿಕ ತಂತ್ರಜ್ಞಾನ ಸೌಲಭ್ಯ ನೀಡಿ ಸೇವೆಗಳನ್ನು ತಂತ್ರಜ್ಞಾನದ ಮೂಲಕ ತಲುಪಿಸುವ ಗುರಿ ಹೊಂದಿದೆ ಎಂದರು.

ವಿಧಾನ ಪರಿಷತ್ ಸದಸ್ಯ ಲೆಹರ್ ಸಿಂಗ್, ಎಸ್.ಡಿ.ಎಂ. ಕಾಲೇಜು ಪ್ರಾಂಶುಪಾಲ ಡಾ.ಪ್ರಸನ್ನ ಎನ್.ರಾವ್, ಬಿಜೆಪಿ ಜಿಲ್ಲಾಧ್ಯಕ್ಷ ಯೋಗಾ ರಮೇಶ್ ಹಾಗೂ ಇತರ ಬಿಜೆಪಿ ಕಾರ್ಯಕರ್ತರು ಹಾಜರಿದ್ದರು.

ಜಿಲ್ಲೆಯ ವಿವಿಧೆಡೆ ಕಳವು ಪ್ರಕರಣ : ಪತ್ತೆಗೆ ತಂಡ ರಚನೆ

ಹಾಸನ : ಜಿಲ್ಲೆಯ ವಿವಿಧೆಡೆ ಕಳವು ಪ್ರಕರಣಗಳು ನಡೆದಿವೆ.

ಆಲೂರು ತಾಲ್ಲೂಕಿನ ವಿಜಯದುರ್ಗ ದೇವಸ್ಥಾನದ ಹುಂಡಿಯನ್ನು ಒಡೆದು 3 ಲಕ್ಷ ರೂ.ಗೂ ಹೆಚ್ಚು ಹಣವನ್ನು ಕಳ್ಳರು ದೋಚಿದ್ದಾರೆ. ದೇವಿಯ ಮೈಮೇಲಿದ್ದ ಆಭರಣ ಕಳವಿಗೂ ವಿಫಲ ಯತ್ನ ನಡೆದಿದೆ.

ಬುಧವಾರ ರಾತ್ರಿ ಸಕಲೇಶಪುರದ ಖಾಸಗಿ ಶಾಲೆಯೊಂದರ ಬೀಗ ಮುರಿದು 1 ಲಕ್ಷ ರೂ. ಮೌಲ್ಯದ ವಿವಿಧ ಬೆಲೆ ಬಾಳುವ ವಸ್ತುಗಳನ್ನು ದೋಚಲಾಗಿದೆ.

ಇದಾದ ನಂತರ ಯಸಳೂರಿನ ರೆಸಾರ್ಟ್‌ನಲ್ಲಿ ಬೆಲೆ ಬಾಳುವ ವಸ್ತುಗಳನ್ನು ಹೊತ್ತೊಯ್ಯಲಾಗಿದೆ.

ಹೊಳೆನರಸೀಪುರ ತಾಲ್ಲೂಕಿನ ಮಾವಿನಕೆರೆ ರಂಗನಾಥಸ್ವಾಮಿ ಬೆಟ್ಟದಲ್ಲಿ ಹುಂಡಿಯನ್ನು ದೋಚಲಾಗಿದೆ. ಈ ಎಲ್ಲಾ ಘಟನೆಗಳು ಒಂದೇ ರಾತ್ರಿ ನಡೆದಿವೆ.

ಒಂದೇ ತಂಡ ಎಲ್ಲಾ ಕೃತ್ಯಗಳಲ್ಲಿ ಭಾಗಿಯಾಗಿರಬಹುದೆಂದು ಪೊಲೀಸರು ಸಂಶಯಿಸಿದ್ದಾರೆ.

ಈ ಘಟನೆ ಪೊಲೀಸ್ ಇಲಾಖೆಯ ನಿದ್ದೆಗೆಡಿಸಿದೆ. ಕಳವು ಪ್ರಕರಣ ಹೆಚ್ಚುತ್ತಿರುವುದರಿಂದ ಪೊಲೀಸರಿಗೆ ತಲೆ ನೋವಾಗಿ ಪರಿಣಮಿಸಿದೆ.

ಈ ಪ್ರಕರಣ ಪತ್ತೆ ಹಚ್ಚುವ ಸಲುವಾಗಿ ಪೊಲೀಸರು ವಿಶೇಷ ತಂಡವನ್ನು ರಚಿಸಿದ್ದಾರೆ.

ತಮ್ಮನ್ನು ಭೇಟಿಯಾದ ಮಾಧ್ಯಮ ಪ್ರತಿನಿಧಿಗಳೊಂದಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಹುಲ್ ಕುಮಾರ್ ಶಹಾಪುರವಾಡ್, ಈಗಾಗಲೇ ಶ್ವಾನ ದಳ ತಪಾಸಣೆ ನಡೆಸಿದೆ. ಹಿರಿಯ ಅಧಿಕಾರಿಗಳ ನೇತೃತ್ವದಲ್ಲಿ ತನಿಖಾ ತಂಡ ರಚಿಸಲಾಗಿದೆ. ಶೀಘ್ರವೇ ಪ್ರಕರಣ ಪತ್ತೆ ಹಚ್ಚಲಾಗುವುದು ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮೇಲ್ಛಾವಣಿ ಹಾರಿ ಹೋಗಿತ್ತು

ಮಾವಿನಕೆರೆ ರಂಗನಾಥಸ್ವಾಮಿ ದೇವಾಲಯಕ್ಕೆ ಇತ್ತೀಚೆಗೆ ಸಿಡಿಲು ಬಡಿದ ಪರಿಣಾಮ ಮೇಲ್ಛಾವಣಿ ಹಾರಿ ಹೋಗಿತ್ತು. ಮುಂಬಾಗಿಲು ಸ್ವಲ್ಪ ಜಖಂಗೊಂಡಿತ್ತು. ಕಳ್ಳರು ಇದೇ ಸಂದರ್ಭದಲ್ಲಿ ಹುಂಡಿ ದೋಚಿದ್ದಾರೆ. ಈ ಭಾಗದ ಸುತ್ತಮುತ್ತಲ ಭಕ್ತರು ಪ್ರಕರಣ ನಡೆದಿರುವುದರಿಂದ ಬೆಚ್ಚಿ ಬಿದ್ದಿದ್ದಾರೆ.

ವಕೀಲರ ಕ್ಷೇಮಾಭಿವೃದ್ಧಿ ನಿಧಿ ಹೆಚ್ಚಿಸಲು ಚಿಂತನೆ

ಹಾಸನ : ವಕೀಲರ ಕ್ಷೇಮಾಭಿವೃದ್ಧಿ ನಿಧಿ ಹೆಚ್ಚಿಸಲು ವಕೀಲರ ತಿದ್ದುಪಡಿ ಕಾಯ್ದೆ 61ರ ಬಗ್ಗೆ ಸಂಸತ್‌ನಲ್ಲಿ ಚರ್ಚಿಸಲಾಗುವುದು ಎಂದು ಕೇಂದ್ರದ ಕಾನೂನು ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವ ಪಿ.ಪಿ.ಚೌಧರಿ ತಿಳಿಸಿದರು.

ವಕೀಲರ ಸಮಸ್ಯೆ ಆಲಿಸಲು ಗುರುವಾರ ನಗರಕ್ಕೆ ಆಗಮಿಸಿದ್ದ ಕೇಂದ್ರ ಸಚಿವರಿಗೆ, ಜಿಲ್ಲಾ ವಕೀಲರ ಸಂಘದಲ್ಲಿ ಅಧ್ಯಕ್ಷ ಬಿ.ಟಿ.ಲಕ್ಷ್ಮೀನಾರಾಯಣ, ವಕೀಲರ ಸಮಸ್ಯೆ ಬಗೆಹರಿಸುವಂತೆ ತಮ್ಮ ಬೇಡಿಕೆಯ ಪ್ರತಿ ನೀಡಿದರು.

ನಂತರ ಮಾತನಾಡಿದ ಪಿ.ಪಿ.ಚೌಧರಿ ಅವರು, ನನಗೂ ವಕೀಲರ ಸಮಸ್ಯೆ ಅರಿವಿದೆ. ನಾನು ಹೈಕೋರ್ಟ್, ಸುಪ್ರೀಂ ಕೋರ್ಟ್‌ನಲ್ಲಿ ಹಿರಿಯ ವಕೀಲನಾಗಿದ್ದೆ. ನಿಮ್ಮ ಸಮಸ್ಯೆ ಬಗೆಹರಿಸಲು ಪ್ರಾಮಾಣಿಕ ಪ್ರಯತ್ನಪಡುತ್ತೇನೆ ಎಂದರು.

ಸಂಸತ್‌ನಲ್ಲಿ ಕಾಯ್ದೆ ತಿದ್ದುಪಡಿ ಬಗ್ಗೆ ಚರ್ಚೆ ನಡೆಯುತ್ತಿದೆ. ಹೈಕೋರ್ಟ್, ಸುಪ್ರೀಂ ಕೋರ್ಟ್, ಕೆಳ ಹಂತದ ನ್ಯಾಯಾಲಯಗಳಿಗೆ ವಕೀಲರ ನೇಮಕಾತಿ ಪ್ರಕ್ರಿಯೆ ಆರಂಭವಾಗಿದೆ. ವಕೀಲರ 61ರ ಕಾಯ್ದೆಗೆ ತಿದ್ದುಪಡಿಯ ಅಗತ್ಯ ಇದೆ ಎಂದು ಚೌಧರಿ ಪ್ರತಿಪಾದಿಸಿದರು.

ಮಹದಾಯಿ, ಕಾವೇರಿ ನ್ಯಾಯಾಧೀಕರಣ ಸಮಸ್ಯೆ ಬಗೆಹರಿಸುವ ಕುರಿತು ಕೂಲಂಕುಷವಾಗಿ ತಿಳಿಸದೆ ಕೇಂದ್ರ ಸಚಿವರು ಹಾರಿಕೆ ಉತ್ತರ ನೀಡಿದರು.

ದೇಶದಲ್ಲಿ ಭ್ರಷ್ಟಾಚಾರ ನಿರ್ಮೂಲನೆ ಬಗ್ಗೆ ಮೋದಿ ಸರ್ಕಾರ ದಿಟ್ಟ ಕ್ರಮ ಕೈಗೊಂಡಿದೆ. ನೋಟು ಅಪನಗದೀಕರಣದಿಂದ ಕಪ್ಪು ಹಣ ಕೂಡಿಡುವವರ ಸಂಖ್ಯೆ ಕಡಿಮೆಯಾಗಿದೆ ಎಂದರು.

ಸಂವಾದದಲ್ಲಿ ಎಂ.ಎಲ್.ಸಿ. ಲೆಹರ್ ಸಿಂಗ್, ಬಿಜೆಪಿ ಜಿಲ್ಲಾಧ್ಯಕ್ಷ ಯೋಗಾ ರಮೇಶ್, ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಕಟ್ಟಾಯ ಸತೀಶ್ ಮತ್ತು ವಕೀಲರು ಉಪಸ್ಥಿತರಿದ್ದರು.

ಸಾಲ ಮನ್ನಾ : ಹಾರಿಕೆ ಉತ್ತರ ನೀಡಿದ ಕೇಂದ್ರ ಸಚಿವ

ರೈತರ ಸಾಲ ಮನ್ನಾಕ್ಕೆ ಸಂಬಂಧಿಸಿದಂತೆ ಕೇಂದ್ರದ ಕಾನೂನು ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವ ಪಿ.ಪಿ.ಚೌಧರಿ ಸ್ಪಷ್ಟ ಉತ್ತರ ನೀಡಲಿಲ್ಲ.

ಪ್ರವಾಸಿ ಮಂದಿರದಲ್ಲಿ ಗುರುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ರೈತರ ಪರವಾಗಿ ಕೆಲಸ ಮಾಡಿದೆ. ಅವರನ್ನು ಆರ್ಥಿಕವಾಗಿ ಮೇಲೆತ್ತಲು ಎಲ್ಲಾ ಅಗತ್ಯ ಕ್ರಮ ಕೈಗೊಂಡಿದೆ ಎಂದರು.

ಸಾಲ ಮನ್ನಾ ವಿಚಾರವಾಗಿ ಅವರು ಖಚಿತವಾಗಿ ಉತ್ತರಿಸಲಿಲ್ಲ. ಈ ಬಗ್ಗೆ ಪುನಃ ಪ್ರಶ್ನಿಸಿದಾಗ, ಕೇಂದ್ರವು ರೈತರಿಗೆ ಪ್ರೋತ್ಸಾಹ ಧನವನ್ನು ನೀಡುತ್ತಿದೆ ಎಂದು ಹೇಳಿದರು.

ರಾಜ್ಯದಲ್ಲಿ ನಡೆಯುವ ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಭಾರತೀಯ ಜನತಾ ಪಕ್ಷ ಹೆಚ್ಚು ಸ್ಥಾನವನ್ನು ಗಳಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. 150ಕ್ಕೂ ಹೆಚ್ಚು ಸ್ಥಾನ ಗಳಿಸಿ ರಾಜ್ಯದಲ್ಲಿ ಬಿಜೆಪಿ ಅಧಿಕಾರ ಹಿಡಿಯಲಿದೆ. ಪ್ರಧಾನಿ ಮೋದಿ ನೇತೃತ್ವದಲ್ಲಿ ದೇಶಾದ್ಯಂತ ಒಳ್ಳೆಯ ಕೆಲಸವಾಗಿದೆ. ಪ್ರಧಾನಿ 14 ಗಂಟೆ ಕಾಲ ಕೆಲಸ ಮಾಡುತ್ತಿದ್ದಾರೆ ಎಂದರು.

ಉತ್ತರ ಪ್ರದೇಶದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಿತು. ಅದೇ ರೀತಿ ಕರ್ನಾಟಕದಲ್ಲೂ ಬಿಜೆಪಿ ಅಧಿಕಾರ ಹಿಡಿಯಲಿದೆ. ಜನಪರ ಕೆಲಸ ಮಾಡಿರುವುದರಿಂದ ಮೋದಿಯವರ ಬಗ್ಗೆ ಜನ ವಿಶ್ವಾಸ ಹೊಂದಿದ್ದಾರೆ. ರಾಜ್ಯದಲ್ಲಿ ಜನ ಕಾಂಗ್ರೆಸ್‌ನ್ನು ತಿರಸ್ಕರಿಸಲಿದ್ದಾರೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷ ಯೋಗಾ ರಮೇಶ್, ಮುಖಂಡರಾದ ನವಿಲೆ ಅಣ್ಣಪ್ಪ ಇನ್ನಿತರರು ಇದ್ದರು.

13ಕ್ಕೆ ವಿಧಾನಸೌಧ ಚಲೋ ಹೋರಾಟಕ್ಕೆ ನಿರ್ಧಾರ

ಹಾಸನ : ಕೇಂದ್ರ ಸರಕಾರದ ಅನುದಾನ ಕಡಿತ ವಿರೋಧಿಸಿ ಹಾಗೂ ಖಾಸಗೀಕರಣ ಮಾಡುವುದನ್ನು ಖಂಡಿಸಿ ಅಕ್ಷರ ದಾಸೋಹ ನೌಕರರು ಬಿಸಿಯೂಟ ಕೆಲಸವನ್ನು ಬಂದ್ ಮಾಡಿ ವಿಧಾನಸೌಧ ಚಲೋ ಹೋರಾಟವನ್ನು ಜೂನ್ 13ರಂದು ಹಮ್ಮಿಕೊಳ್ಳಲಿದ್ದಾರೆ ವುದಾಗಿ ಸಿಐಟಿಯು ಅಧ್ಯಕ್ಷೆ ಎಂ.ಬಿ.ಪುಷ್ಪ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ಶಿಕ್ಷಣ ಎಂಬುವುದು ಒಂದು ಮಗುವಿನ ಮೂಲಭೂತ ಹಕ್ಕು. ಹಾಗೆಯೇ ಶಿಕ್ಷಣವು ಒಂದು ದೇಶದ ಅಭಿವೃದ್ಧಿಗೆ ನೇರವಾಗಿ ಸಂಬಂಧಿಸಿದೆ. ಇಂತಹ ಶಿಕ್ಷಣವನ್ನು ಸರ್ಕಾರ ತನ್ನ ಆದ್ಯತೆ ಎಂದು ಭಾವಿಸಿ ಸ್ವಾತಂತ್ರ್ಯ ನಂತರವೂ ಹಲವಾರು ಯೋಜನೆಗಳನ್ನು ರೂಪಿಸಿದೆ. ಇಂತಹ ಯೋಜನೆಗಳಿಂದ ಕೋಟ್ಯಾಂತರ ಮಕ್ಕಳು ಇಂದು ಸರಕಾರಿ ಶಾಲೆಗಳಲ್ಲಿ ಕಲಿಯುತ್ತಿದ್ದಾರೆ. ಮಕ್ಕಳ ಹಾಜರಾತಿ ಹೆಚ್ಚಿಸಲು, ಮಧ್ಯಾಹ್ನದ ನಂತರ ಶಾಲಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಲು, ಪಾಠದ ಸಾರಾಂಶಗಳನ್ನು ಗ್ರಹಿಸುವಲ್ಲಿ ವೈಫಲ್ಯತೆಗಳಿರುವುದನ್ನು ಗಮನಿಸಿ ಹಲವು ವಿದ್ಯಾರ್ಥಿ ಸಂಘಗಳ ಚಳವಳಿಗಳು ಮತ್ತು ಪ್ರಜಾಸತ್ತಾತ್ಮಕ ಚಳವಳಿಗಳು ಹೋರಾಟ ನಡೆಸಿ ಒತ್ತಡ ಹೇರಿದ ಹಿನ್ನೆಲೆಯಲ್ಲಿ 2001ರಲ್ಲಿ ಸರ್ವೋಚ್ಚ ನ್ಯಾಯಾಲಯ 500 ಗ್ರಾಂ ಪ್ರೋಟಿನ್- ವಿಟಮಿನ್‌ಗಳ ಬಿಸಿಯಾದ ಆಹಾರವನ್ನು ಕೊಡಬೇಕೆಂದು ಆದೇಶಿಸಿತ್ತು. ಈ ಆದೇಶದ ಮೇರೆಗೆ ಇಡೀ ದೇಶದಲ್ಲಿ ಸುಮಾರು 11.43 ಲಕ್ಷ ಪ್ರಾಥಮಿಕ ಶಾಲೆಗಳಲ್ಲಿ 11 ಕೋಟಿ ಮಕ್ಕಳಿಗೆ ಬಿಸಿಯೂಟ ಯೋಜನೆ ಪ್ರಾರಂಭಿಸಲಾಯಿತು ಎಂದು ತಿಳಿಸಿದರು.

ಅಂದಿನ ಸರಕಾರ ಮಾರ್ಗದರ್ಶಿ ಸೂತ್ರಗಳಲ್ಲಿ ವಿಧವೆ, ದಲಿತ, ಹಿಂದುಳಿದ, ಗ್ರಾಮಾಂತರ ಮತ್ತು ಸಂತ್ರಸ್ತ ಮಹಿಳೆಯರಿಗೆ ಉದ್ಯೋಗ ಅವಕಾಶ ಮತ್ತು ಮಕ್ಕಳು ಸಾಮಾಜಿಕ ಸಹಬಾಳ್ವೆ ನಡೆಸುವುದನ್ನು ಖಾತ್ರಿಗೊಳಿಸಿತ್ತು. ಧರ್ಮಾಧಾರಿತ ಮತ್ತು ಜಾತಿ ಆಧಾರಿತ ಸ್ವಯಂ ಸೇವಾ ಸಂಸ್ಥೆಗಳಿಗೆ ನಿಷೇಧವನ್ನು ಹೇರಿತ್ತು. 2013ರ ಕೇಂದ್ರ ಸರ್ಕಾರ ಸಾಮಾಜಿಕ ಕಲ್ಯಾಣ ಯೋಜನೆಗಳಿಗೆ ಮಾಡುತ್ತಿದ್ದ ವೆಚ್ಚವನ್ನು ಕಡಿತ ಮಾಡಲು ಯೋಜನಾ ಆಯೋಗದ ಬದಲು ನೀತಿ ಆಯೋಗವನ್ನು ರಚಿಸಿತು. ತಕ್ಷಣ ನೀತಿ ಆಯೋಗ ಆಹಾರ , ಆರೋಗ್ಯ, ಶಿಕ್ಷಣ, ಗ್ರಾಮೀಣಾಭಿವೃದ್ಧಿ, ಉದ್ಯೋಗ ಖಾತ್ರಿಗಳಿಗೆ ಕೊಡುತ್ತಿದ್ದ ಅನುದಾನಗಳನ್ನು ಕಡಿತ ಮಾಡಿತು. ಬಿಸಿಯೂಟ ಯೋಜನೆಗೂ ಕೂಡಾ ಶೇ.100, 60ರಷ್ಟು ಅನುದಾನ ಕಡಿತ ಮಾಡಿತು. ಈ ಕಡಿತವನ್ನು ವಿರೋಧಿಸಿ ದೇಶದಾದ್ಯಂತ 25 ಲಕ್ಷ ಬಿಸಿಯೂಟ ನೌಕರರು ಹೋರಾಟ ನಡೆಸುತ್ತಿದ್ದಾರೆ ಎಂದರು.

ಈಗಾಗಲೇ ಹಲವು ಎನ್.ಜಿ.ಓ.ಗಳು ಸ್ವಲ್ಪ ಮಟ್ಟಿಗೆ ದೇಶಾದ್ಯಂತ ಬಿಸಿಯೂಟ ಕೆಲಸ ಮಾಡುತ್ತಿವೆ. ಆ ಎನ್.ಜಿ.ಓ.ಗಳಲ್ಲಿ ಮುಖ್ಯವಾಗಿ ಇಸ್ಕಾನ್, ಅಕ್ಷಯ ಪಾತ್ರೆ, ಅದಮ್ಯ ಚೇತನ ಸಂಸ್ಥೆಗಳು ಕೆಲಸ ಮಾಡುತ್ತಿವೆ ಎಂದು ಹೇಳಿದರು. (-4ನೇ ಪುಟಕ್ಕೆ)

17ರಂದು ಫಲಾನುಭವಿಗಳಿಗೆ ಸವಲತ್ತು ವಿತರಣೆ

ನಗರಸಭಾ ಅಧ್ಯಕ್ಷ ಹೆಚ್.ಎಸ್.ಅನಿಲ್ ಕುಮಾರ್ ವಿವರಣೆ

ಹಾಸನ : ಪರಿಶಿಷ್ಟ ಜಾತಿ ಹಾಗೂ ಪಂಗಡದ ಫಲಾನುಭವಿಗಳಿಗೆ ಸವಲತ್ತು ವಿತರಣೆ ಸೇರಿದಂತೆ ಅಂಗವಿಕಲರ ಕುಂದು ಕೊರತೆ ಆಲಿಸಿ ಯೋಜನೆಗಳ ಬಗ್ಗೆ ಮಾಹಿತಿ ನೀಡುವ ಕಾರ್ಯಕ್ರಮವನ್ನು ಜೂನ್ 17 ರಂದು ಹಳೇ ನಗರಸಭೆಯ ಕುವೆಂಪು ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ನಗರಸಭೆ ಅಧ್ಯಕ್ಷ ಹೆಚ್.ಎಸ್.ಅನಿಲ್ ಕುಮಾರ್ ತಿಳಿಸಿದರು.

ಅಂಗವಿಕಲರ ಕುಂದು ಕೊರತೆ, ಪರಿಶಿಷ್ಟ ಜಾತಿ ಹಾಗೂ ಪಂಗಡದ ಅರ್ಹ ಫಲಾನುಭವಿಗಳಿಗೆ ಸಿಗಬೇಕಾದ ಸವಲತ್ತುಗಳ ಬಗ್ಗೆ ಅಂದಿನ ಸಭೆಯಲ್ಲಿ ಮಾಹಿತಿ ನೀಡಿ ಸಮಸ್ಯೆ ಬಗೆಹರಿಸಿಕೊಳ್ಳಬಹುದು ಎಂದು ಗುರುವಾರ ತಮ್ಮ ಕಛೇರಿಯಲ್ಲಿ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ವಿವರಿಸಿದರು.

ಎಸ್.ಎಫ್.ಸಿ. ಮುಕ್ತನಿಧಿ ಮತ್ತು ನಗರ ಸಭಾ ನಿಧಿಯಡಿ ಶೇಕಡ 24.10, ಶೇಕಡ 7.25 ಮತ್ತು ಶೇಕಡ 3ರ ವಿಕಲಚೇತನರ ಕಲ್ಯಾಣ ನಿಧಿ ಯೋಜನೆಯಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಬಡ ಜನರ ಅರ್ಹ ಫಲಾನುಭವಿಗಳಿಗೆ ಅನುಷ್ಠಾನಗೊಳಿಸಲು ಉದ್ದೇಶಿಸಿರುವ ಕ್ರಿಯಾ ಯೋಜನೆಯ ಹಲವಾರು ಕಾರ್ಯಕ್ರಮದ ಬಗ್ಗೆ ಮಾಹಿತಿ ನೀಡಲು ಜೂನ್ 17ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೂ ಸಭೆ ಆಯೋಜಿಸಲಾಗಿದೆ. ಸಭೆಯಲ್ಲಿ ಅಂಗವಿಕಲರ ಕುಂದು ಕೊರತೆಯನ್ನು ಆಲಿಸಿ, ಅವರಿಗೆ ಬೇಕಾಗಿರುವ ಸಲಕರಣೆಯನ್ನು ನೇರವಾಗಿ ಅವರಿಗೆ ತಲುಪಿಸಲು ಗಮನ ನೀಡಲಾಗುವುದು ಎಂದರು.

ಈ ಯೋಜನೆಯ ಸದುಪಯೋಗ ಪಡೆಯಲು ನಗರ ವ್ಯಾಪ್ತಿಯಲ್ಲಿ ವಾಸವಾಗಿರಬೇಕು ಎಂದರು.

ಅಂಗವಿಕಲರಿಗೆ ಸಂಗೀತ ಪರಿಕರಗಳನ್ನು ಒದಗಿಸಲು 2 ಲಕ್ಷ ರೂ. ಮೀಸಲಿಡಲಾಗಿದೆ. ಅಂಗವಿಕಲರಿಗೆ ವೀಲ್ ಛೇರ್, ಕಣ್ಣು, ಕಿವಿ, ಕೈ ಇತರೆ ಅಂಗಗಳ ಪೂರಕ ಸಾಧನಗಳಾದ ಶ್ರವಣ ಸಾಧನ, ಕೃತಕ ಕಾಲು, ಕನ್ನಡಕ, ಶೂ, ಊರುಗೋಲು ನೀಡಲು 18 ಲಕ್ಷದ 59 ಸಾವಿರ ರೂ. ಮೀಸಲಿಡಲಾಗಿದೆ ಎಂದು ಹೇಳಿದರು.

ನಗರಸಭೆ ವ್ಯಾಪ್ತಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅರ್ಹ ಫಲಾನುಭವಿಗಳ ಶಸ್ತ್ರ ಚಿಕಿತ್ಸೆಗೆ ಧನ ಸಹಾಯ ನೀಡುವ ಕಾರ್ಯಕ್ರಮವನ್ನು ಕೂಡ ಹಮ್ಮಿಕೊಳ್ಳಲಾಗಿದೆ. ಇವರಿಗಾಗಿ 20 ಲಕ್ಷ ರೂ.ಗಳನ್ನು ಮೀಸಲಿಡಲಾಗಿದೆ. ಶಸ್ತ್ರ ಚಿಕಿತ್ಸೆಗೆ ಮಾತ್ರ ವೈದ್ಯಕೀಯ ವೆಚ್ಚವನ್ನು ಸಂಬಂಧಪಟ್ಟ ಆಸ್ಪತ್ರೆಗೆ ಪಾವತಿಸಲಾಗುವುದು ಎಂದರು. (-4ನೇ ಪುಟಕ್ಕೆ)

ಬ್ಯಾಂಕ್‌ನಲ್ಲಿ ಸಿಬ್ಬಂದಿ ಕೊರತೆ : ಗ್ರಾಹಕರಿಗೆ ಸಮಸ್ಯೆ

ಹೆತ್ತೂರು: ಇಲ್ಲಿನ ಎಸ್‌ಬಿಐ ಬ್ಯಾಂಕ್ ಶಾಖೆಯಲ್ಲಿ ಸಿಬ್ಬಂದಿ ಕೊರತೆಯಿಂದಾಗಿ ಗ್ರಾಹಕರು ಸಮಸ್ಯೆ ಎದುರಿಸುವಂತಾಗಿದೆ.

ಹೆತ್ತೂರು ಹೋಬಳಿಯ ಸುಮಾರು 60 ಗ್ರಾಮಗಳಿಗೆ ಇರುವ ಏಕೈಕ ಬ್ಯಾಂಕ್ ಇದಾಗಿದ್ದು, ಸುಮಾರು ಸಾವಿರಕ್ಕೂ ಅಧಿಕ ಗ್ರಾಹಕರಿದ್ದಾರೆ. ನಿತ್ಯ ಕೋಟ್ಯಾಂತರ ರೂ. ವಹಿವಾಟು ನಡೆಯುತ್ತದೆ. ಆದರೆ ಇತ್ತೀಚಿಗೆ ಸಿಬ್ಬಂದಿ ಕೊರತೆಯಿಂದಾಗಿ ಗ್ರಾಹಕರು ಸಾಕಷ್ಟು ಸಮಸ್ಯೆ ಎದುರಿಸುವಂತಾಗಿದೆ.

ಬ್ಯಾಂಕಿನಲ್ಲಿ ಏಳು ಮಂಜೂರಾತಿ ಹುದ್ದೆಗಳಿದ್ದು, ಕೇವಲ ಮೂವರು ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಅದರಲ್ಲೂ ಬ್ಯಾಂಕ್ ಮ್ಯಾನೇಜರ್ ಇಲ್ಲದೆ ಮತ್ತಷ್ಟು ಸಮಸ್ಯೆ ಹೆಚ್ಚಾಗಿದೆ. ಮುಂಗಾರು ಆರಂಭದ ಈ ಹೊತ್ತಿನಲ್ಲಿ ಬೆಳೆ ಸಾಲ, ವಿದ್ಯಾಭ್ಯಾಸದ ಸಾಲ ಸೇರಿದಂತೆ ವಿವಿಧ ಕೆಲಸಗಳಿಗಾಗಿ ಬ್ಯಾಂಕನ್ನು ಅವಲಂಬಿಸಿರುವವರ ಸಂಖ್ಯೆ ಹೆಚ್ಚಿದೆ. ಆದರೆ ಸಿಬ್ಬಂದಿ ಕೊರತೆಯ ಕಾರಣ ಸಕಾಲಕ್ಕೆ ಕೆಲಸವಾಗದೆ ಗ್ರಾಹಕರು ಹೈರಾಣಾಗಿದ್ದಾರೆ. ಮುಂದಿನ ಒಂದು ವಾರದಲ್ಲಿ ಅಗತ್ಯ ಸಿಬ್ಬಂದಿ ನೇಮಿಸದಿದ್ದರೆ ಬ್ಯಾಂಕಿಗೆ ಬೀಗ ಜಡಿದು ಪ್ರತಿಭಟನೆ ನಡೆಸಲಾಗುವುದು ಎಂದು ಸಾರ್ವಜನಿಕರು ಎಚ್ಚರಿಸಿದ್ದಾರೆ.

ಹಾಸನ-ದುದ್ದ-ತಿಪಟೂರು ರಸ್ತೆ ದುರಸ್ತಿಗೇಕೆ ವಿಳಂಬ?

ಹಾಸನ : ದುದ್ದ-ತಿಪಟೂರು ರಸ್ತೆ ದುರಸ್ತಿ ಆಗದೇ ವಿಳಂಬವಾಗಿರುವುದರಿಂದ ಪ್ರಯಾಣಿಕರು ಭಾರೀ ಪ್ರಯಾಸಪಡಬೇಕಾದ ದುಸ್ಥಿತಿ ನಿರ್ಮಾಣವಾಗಿದೆ.

ಗಂಡಸಿಯಿಂದ ಆ ಭಾಗಕ್ಕೆ ರಸ್ತೆಯೇ ಇಲ್ಲ. ಜನರು ಒಂದು ರೀತಿ ಮೂಕ ವೇದನೆ ಅನುಭವಿಸುತ್ತಿದ್ದಾರೆ. ಪ್ರತಿ ನಿತ್ಯವೂ ಪ್ರಯಾಣಿಸಬೇಕಾದವರು ಜಿಲ್ಲಾಡಳಿತ ಮತ್ತು ಸರ್ಕಾರದ ವಿರುದ್ಧ ಹಿಡಿಶಾಪ ಹಾಕುತ್ತಿದ್ದಾರೆ.

ಹಾಸನ-ದುದ್ದ -ತಿಪಟೂರು ರಸ್ತೆ ದುರಸ್ತಿಗೆ ಒತ್ತಾಯಿಸಿ ಹಿಂದೆ ಚಳವಳಿ ನಡೆದಿತ್ತು. ವಿವಿಧ ಸಂಘಟನೆಗಳು ಧರಣಿ ಕೂಡ ನಡೆಸಿದ್ದವು. ಆ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದ ಹೆಚ್.ಸಿ.ಮಹದೇವಪ್ಪ ರಸ್ತೆ ಬಗ್ಗೆ ಗಮನ ಹರಿಸಿದ್ದರು. ಗಂಡಸಿಯ ತನಕ ತಾತ್ಕಾಲಿಕ ರಸ್ತೆಯನ್ನು ನಿರ್ಮಿಸಲಾಗಿತ್ತು. ಈಗ ಮತ್ತೆ ರಸ್ತೆ ಹಾಳಾಗಿದೆ. ಓಡಾಡಲು ಸಾಧ್ಯವೇ ಆಗುತ್ತಿಲ್ಲ.

ಅರಸೀಕೆರೆ, ಹಾಸನ, ತಿಪಟೂರು ಹಾಗೂ ಹೊಳೆನರಸೀಪುರ ಕ್ಷೇತ್ರದ ನಾಲ್ವರು ಶಾಸಕರು ಈ ವ್ಯಾಪ್ತಿಗೆ ಬರುತ್ತಾರೆ. ಆದರೆ ರಸ್ತೆ ದುರಸ್ತಿ ಭಾಗ್ಯ ಮಾತ್ರ ಕಂಡಿಲ್ಲ.

ಇತ್ತೀಚೆಗೆ ಅಧಿಕಾರಿಗಳ ತಂಡವೊಂದು ಜಿಲ್ಲೆಗೆ ಭೇಟಿ ನೀಡಿತ್ತು. ಡಾಂಬರು ಅಥವಾ ಸಿಮೆಂಟ್ ರಸ್ತೆ ನಿರ್ಮಿಸುವ ಕುರಿತು ಜಿಜ್ಞಾಸೆ ಹೊಂದಿತ್ತು. ನಂತರ ಸಿಮೆಂಟ್ ರಸ್ತೆ ನಿರ್ಮಾಣಕ್ಕಾಗಿ ಒಪ್ಪಿಗೆ ನೀಡಿತು. ಇದು ರಾಜ್ಯ ಸರ್ಕಾರಕ್ಕೂ ಪ್ರಸ್ತಾವನೆ ಸಲ್ಲಿಕೆಯಾಗಿದೆ.

ಪ್ರಸ್ತಾವನೆ ಸಲ್ಲಿಸಿ ಸಾಕಷ್ಟು ದಿವಸ ಕಳೆದಿದ್ದರೂ, ದುರಸ್ತಿಗೆ ಅನುಮತಿ ಸಿಕ್ಕಿಲ್ಲ. ಹೀಗಾಗಿ ರಸ್ತೆಯು ಅನಾಥವಾಗಿದೆ. ಯಾಕಿಷ್ಟು ವಿಳಂಬ ಮಾಡಲಾಗುತ್ತಿದೆ ಎಂಬ ಬಗ್ಗೆ ಚರ್ಚೆ ನಡೆದಿದೆ.

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಈ ಸಂಬಂಧ ತೀವ್ರವಾಗಿ ಗಮನ ಹರಿಸಿದರೆ ರಸ್ತೆಗೆ ಕಾಯಕಲ್ಪ ಸಿಗುತ್ತದೆ. ಅವರಿಗಿರುವ ರಾಜಕೀಯ ಶಕ್ತಿಯಿಂದ ಈ ಕೆಲಸ ಮಾಡಲೂಬಹುದು. ಆದರೆ ನಮ್ಮ ಸಂಸದರು ಆದ ದೇವೇಗೌಡರು ಗಮನ ಹರಿಸುತ್ತಿಲ್ಲ. ಒಂದರ್ಥದಲ್ಲಿ ಅವರು ಗುಟುರು ಹಾಕಿದರೆ ಈ ವೇಳೆಗಾಗಲೇ ರಸ್ತೆ ಕೆಲಸವೇ ಸಂಪೂರ್ಣವಾಗುತ್ತಿತ್ತು.

ದೇವೇಗೌಡರು ತಿಂಗಳಿಗೊಂದು ಬಾರಿ ಇಲ್ಲಿ ಸಂಚರಿಸಲಿ. ಅವರ ದೂರವಾಣಿ ಕರೆಗೆ ಶಕ್ತಿ ಇದೆ ಎಂಬುದು ಎಲ್ಲರಿಗೂ ಗೊತ್ತೇ ಇದೆ. ನಮ್ಮ ಶಾಸಕರುಗಳು ಒತ್ತಡ ಹೇರುವಲ್ಲಿ ವಿಫಲರಾಗಿದ್ದಾರೋ? ಅಥವಾ ಇಚ್ಛಾ ಶಕ್ತಿ ಕೊರತೆ ಕಾರಣವೋ? ಆದರೆ ತಿಪಟೂರು ರಸ್ತೆಗೆ ಕಾಯಕಲ್ಪ ದೊರೆತಿಲ್ಲ.

ಪತ್ರಿಕೆ ಈ ಹಿಂದೆ ದುದ್ದ ರಸ್ತೆಗೆ ಸಂಬಂಧಿಸಿದಂತೆ ವಿಸ್ತೃತವಾದ ವರದಿ ಮಾಡಿ ಜಿಲ್ಲಾಡಳಿತ ಹಾಗೂ ರಾಜ್ಯ ಸರ್ಕಾರದ ಗಮನ ಸೆಳೆದಿತ್ತು. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೂ ಈ ಸಮಸ್ಯೆ ಅರಿವಿಗೆ ಬಂದಿತ್ತು. ಈಗ ಮತ್ತೆ ರಸ್ತೆ ಹಾಳಾಗಿದೆ. ಈ ಸಮಸ್ಯೆ ಪರಿಹರಿಸುವವರಾರು?

- ಗಂಡಸಿಯಿಂದ ಆ ಭಾಗಕ್ಕೆ ರಸ್ತೆಯೇ ಇಲ್ಲ
- ಮೂಕ ವೇದನೆ ಅನುಭವಿಸುತ್ತಿದ್ದಾರೆ ಜನ
- ಕಾಂಕ್ರೀಟ್ ರೋಡ್‌ಗೆ ಒಪ್ಪಿಗೆ ದೊರೆತರೂ ದುರಸ್ತಿ ಭಾಗ್ಯವಿಲ್ಲ
- ಪ್ರಸ್ತಾವನೆ ಹೋಗಿ ಸಾಕಷ್ಟು ಸಮಯ ಕಳೆದರೂ ಅನುಮತಿ ದೊರೆತಿಲ್ಲ
- ಜನಪ್ರತಿನಿಧಿಗಳ ದಿವ್ಯ ಮೌನಕ್ಕೆ ಅಸಮಾಧಾನ
- ಸಂಸದ ಹೆಚ್.ಡಿ.ದೇವೇಗೌಡ ಗಮನಿಸಬಾರದೇ?